DPI(S)
DPI (P)

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಸೆಪ್ಟೆಂಬರ್ 2015 ರಿಂದ ಫೆಬ್ರವರಿ 2016 ರವರೆಗೆ ವಯೋ ನಿವೃತ್ತಿಯಾಗಲಿರುವ ಶಿಕ್ಷಕರು/ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸುವ ಕುರಿತು.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ:ಇಡಿ 64 ಎಸ್‌ಟಿಬಿ 2013 ದಿನಾಂಕ:25.06.2014.

<u>ಪ್ರಸ್ತಾವನೆ :</u>

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ 2014-15ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಯೋ ನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಮುಂದುವರೆಸಿದಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಅನುವಾಗುವುದೆಂಬ ಉದ್ದೇಶದಿಂದ ಅವರುಗಳ ಸೇವೆಯನ್ನು ಕೆಲವೊಂದು ಷರತ್ತುಗಳನ್ನು ವಿಧಿಸಿ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸಲು ಅನುಮತಿ ನೀಡಲಾಗಿತ್ತು.

ಪ್ರಸ್ತುತ 2015-16ನೇ ಸಾಲಿನಲ್ಲಿ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಸಹ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಹಲವಾರು ಶಿಕ್ಷಕರು ಮತ್ತು ಉಪನ್ಯಾಸಕರು ವಯೋನಿವೃತ್ತಿಯಾಗಲಿರುವ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪಾಠ ಪ್ರವಚನಗಳು ಸುಸೂತ್ರವಾಗಿ ನಡೆಯಲು ಅನುವಾಗುವಂತೆ 2015-16ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ ಸೆಪ್ಟಂಬರ್ 2015 ರಿಂದ ಫೆಬ್ರವರಿ 2016 ರವರೆಗೆ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಅಂದರೆ ಮಾರ್ಚ್ 2016 ರವರೆಗೆ ಮುಂದುವರೆಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 227 ಎಸ್‌ಟಿಬಿ 2014, ಬೆಂಗಳೂರು, ದಿನಾಂಕ : 28/09/2015.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2015-16 ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ ಸೆಪ್ಟೆಂಬರ್ 2015 ರಿಂದ ಫೆಬ್ರವರಿ 2016 ರವರೆಗೆ ವಯೋನಿವೃತ್ತರಾಗಲಿರುವ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರನ್ನು 31/03/2016 ರವರೆಗೆ ಸೇವೆಯಲ್ಲಿ ಮುಂದುವರೆಸಲು, ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ಅನುಮತಿ ನೀಡಲಾಗಿದೆ.

1) ಈ ರೀತಿ ನೇಮಕಗೊಂಡವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 313(ಬಿ) ಪ್ರಕಾರ ವೇತನವನ್ನು ನಿಗದಿಪಡಿಸತಕ್ಕದ್ದು;

. . .2

2) ಶೈಕ್ಷಣಿಕ ವರ್ಷದ ಪ್ರಾರಂಭದ ನಂತರ, ಅಂದರೆ ಸೆಪ್ಟಂಬರ್-2015 ರ ತಿಂಗಳಿನಿಂದ ಫೆಬ್ರವರಿ-2016 ರ ತಿಂಗಳ ಅಂತ್ಯದವರೆಗೆ ನಿವೃತ್ತರಾಗುವ ಶಿಕ್ಷಕರು / ಉಪನ್ಯಾಸಕರಿಗೆ (ಮಾರ್ಚ್-2016 ತಿಂಗಳವರೆಗೆ ಕಾರ್ಯನಿರ್ವಹಿಸಲು) ಮಾತ್ರ ಅನ್ವಯವಾಗತಕ್ಕದ್ದು;

3) ಒಂದು ವೇಳೆ ನೇಮಕಾತಿ ಪ್ರಕ್ರಿಯೆಯು ಅಂತಿಮಗೊಂಡು ಹೊಸ ಶಿಕ್ಷಕರು/ಉಪನ್ಯಾಸಕರು ನೇಮಕಗೊಂಡಲ್ಲಿ ಇಂತಹ ನೇಮಕಾತಿ ತಾನೇ ತಾನಾಗಿ ರದ್ದುಗೊಳ್ಳತಕ್ಕದ್ದು.

4) ಕಾರ್ಯಭಾರ ಇರುವ ಹುದ್ದೆಯೆದುರು ಮಾತ್ರ ಮುಂದುವರೆಸತಕ್ಕದ್ದು ಹಾಗೂ ತಾಲ್ಲೂಕಿನಲ್ಲಿ ಹೆಚ್ಚುವರಿ ಶಿಕ್ಷಕರು ಲಭ್ಯವಿದೆಯೇ ಎಂಬ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ ದೃಢೀಕರಿಸಿದ ನಂತರವಷ್ಟೇ ಅನುಮತಿಸಬೇಕು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 899 ವೆಚ್ಚ-8/2015, ದಿನಾಂಕ: 19.09.2015ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

28/9/2015
(ತಾರಾ)
ಸರ್ಕಾರದ ಅಧೀನ ಕಾರ್ಯದರ್ಶಿ(ಸಾಮಾನ್ಯ),
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಇವರಿಗೆ :-

1) ಮಹಾಲೇಖಾಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ/ಧಾರವಾಡ
4) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು
5) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
6) ರಾಜ್ಯ ಹುಜೂರು, ಖಜಾನೆ, ಬೆಂಗಳೂರು
7) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ,
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.